O.S. No.112/2021 -PW-1

ದಿನಾಂಕ 14-02-2023 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿ ಮುಖ್ಯ ವಿಚಾರಣೆಗೆ ಒಳಪಡಿಸಲಾಯಿತು.

**ಮುಖ್ಯ ವಿಚಾರಣೆಃ** ವಾದಿ ಪರವಾಗಿ ಶ್ರೀ. ಬಿ ಎಸ್ ಎಚ್ ವಕೀಲರಿಂದ.

ಈ ದಾವೆಯಲ್ಲಿ ನಾನು ವಾದಿಯ ಆಗಿದ್ದು ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲ ಅಂಶಗಳು ಸತ್ಯವಾಗಿರುತ್ತವೆ ಮತ್ತು ಸದ್ರಿ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನಾನು ಈ ದಿನ ಮಾನ್ಯ ನ್ಯಾಯಾಲಯಕ್ಕೆ ಸರ್ವೇ ನಂಬರ 168/2 ರ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 1 ಎಂದು, ಎಮ್ ಆರ್ ನಂಬರ ಟಿ90/2013-14 ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ 2 ಎಂದು , ಎಮ್ ಆರ್ ನಂಬರ 10/2004-05 ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ 3 ಎಂದು, ಬ್ಲಾಕ್ ನಂಬರ 168/2 ರ ಹಿಸ್ಸಾ ಸೀಟಿನ ದೃಢೀಕೃತ ನಕಲನ್ನು ಹಾಜರಪಡಿಸಿದ್ದು ಅದನ್ನು ನಿಪಿ 4 ಎಂದು ಗುರುತಿಸಲಾಯಿತು. ಆದ್ದರಿಂದ ನಾನು ಸಲ್ಲಿಸಿದ ದಾವೆಯನ್ನು ಡಿಕ್ರಿ ಮಾಡಬೇಕೆಂದು ಕೋರುತ್ತೇನೆ .

**ಪಾಟೀ ಸವಾಲು** : ಪ್ರತಿವಾದಿ ಪರ ವಕೀಲರು ಗೈರು ಹಾಜರಿದ್ದು ಹಾಗೂ ಪ್ರತಿವಾದ ಪತ್ರ ಸಲ್ಲಿಸದೇ ಇರುವುದರಿಂದ ಪಾಟೀ ಸವಾಲನ್ನು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

ಓ.ಹೆ.ಕೇ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾದಂ., ಹಳಿಯಾಳ.